# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ_ಗುರುತಿಲ್ಲದ_ಪ್ರಶ್ನೆ ಸಂಖ್ಯೆ : 73 (171)

2) ಸದಸ್ಯರ_ಹೆಸರು : ಡಾ|| ತೇಜಸ್ವಿನಿ_ಗೌಡ (ವಿಧಾನ_ಸಭೆಯಿಂದ_ಚುನಾಯಿತರಾದವರು)

3) ಉತ್ತರಿಸುವ_ದಿನಾಂಕ : 07.12.2020.

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು.

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಆನೆ ಹಾವಳಿ ನಿಯಂತ್ರಣ ಕುರಿತು ಮಾಹಿತಿ ನೀಡುವುದು; | ರಾಜ್ಯದಲ್ಲಿ ಆನೆ ಹಾವಳಿ ನಿಯಂತ್ರಣಕ್ಕಾಗಿ ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>1. ರಾಜ್ಯದಲ್ಲಿರುವ ಆನೆ ಹಾಗೂ ವನ್ಯಜೀವಿಗಳಿಗೆ ಸಂಪೂರ್ಣ ರಕ್ಷಣೆ ನೀಡುವ ಸಲುವಾಗಿ ರಾಷ್ಟ್ರೀಯ ಉದ್ಯಾನವನ, ಅಭಯಾರಣ್ಯ, ಹುಲಿ ಮೀಸಲು ಅರಣ್ಯ, ಸಂರಕ್ಷಿತ ಮೀಸಲು ಅರಣ್ಯಗಳನ್ನು ಘೋಷಿಸಲಾಗಿದೆ.<br><br>2. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ.<br><br>3. ಆನೆ ಹಾಗೂ ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳನ್ನು ನಿರ್ಮಿಸಿ, ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗಿದೆ.<br><br>4. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br><br>5. ಕಳ್ಳಬೇಟೆ ತಡೆ ಶಿಬಿರಗಳ ಹಾಗೂ ಕ್ಷಿಪ್ರ ಕಾರ್ಯಾಚರಣೆ ತಂಡಗಳ ರೂಪದಲ್ಲಿ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ Wireless networking ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br><br>6. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br><br>7. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವಗಾಯ ತಪ್ಪಿಸಲು ಕ್ರಮ ವಹಿಸಲಾಗಿದೆ.<br><br>8. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.<br><br>9. ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ-ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆದ್ಯತೆ ಮೇರೆಗೆ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ತರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ಇ-ಪರಿಹಾರ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ. |

| | | |
|---|---|---|
| ಆ) | ಅರಣ್ಯದ ಅಂಚಿಗೆ ಆನೆ ದಾಳಿ ತಡೆಯಲು ರೈಲು ಹಳಿ ಕಂಬಿ ಅಳವಡಿಕೆ ಕಾರ್ಯ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕಿ.ಮೀ ಪೂರ್ಣಗೊಂಡಿದೆ; ಇದಕ್ಕೆ ವೆಚ್ಚವಾಗುವ ಅನುದಾನ ಎಷ್ಟು; ಸದರಿ ಅನುದಾನವನ್ನು ಎಲ್ಲಿಂದ ಭರಿಸಲಾಗುವುದು; | ಅರಣ್ಯದ ಅಂಚಿಗೆ ಆನೆ ದಾಳಿ ತಡೆಯಲು ರೈಲು ಹಳಿ ಕಂಬಿ ಅಳವಡಿಕೆ ಕಾರ್ಯ ಪ್ರಾರಂಭವಾಗಿದೆ.<br><br>ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 14029/2008ರ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 25.05.2009ರಲ್ಲಿ ನೀಡಿದ ಆದೇಶದಂತೆ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಸಂಘರ್ಷವನ್ನು ತಡೆಯುವ ಸಲುವಾಗಿ, ಉಪಯೋಗಿಸಿ ಬಿಟ್ಟ ರೈಲ್ವೆ ಹಳಿಗಳನ್ನು ಬಳಸಿಕೊಂಡು ಬ್ಯಾರಿಕೇಡ್‌ನ್ನು ವನ್ಯಜೀವಿ ಘಟಕದಲ್ಲಿ ಚಾಲ್ತಿಯಲ್ಲಿರುವ ರಾಜ್ಯ ವಲಯದ ಲೆಕ್ಕಶೀರ್ಷಿಕೆ ಯೋಜನೆಗಳಡಿ ಅವಕಾಶ ಮಾಡಿಕೊಂಡು 2015-16 ರಿಂದ 2018-19 ನೇ ಸಾಲಿನವರೆಗೆ ಉಪಯೋಗಿತ ರೈಲು ಹಳಿಗಳನ್ನು ಉಪಯೋಗಿಸಿ 83.594 ಕಿ.ಮೀ ರೈಲ್ವೆ ಬ್ಯಾರಿಕೇಡ್‌ನ್ನು ನಿರ್ಮಿಸಿದ್ದು, ಇದಕ್ಕಾಗಿ ಒಟ್ಟು ರೂ.9696.90 ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.<br><br>ಅದಾಗ್ಯೂ, 2019-20ನೇ ಸಾಲಿನಿಂದ "ಉಪಯೋಗಿಸಿದ ರೈಲ್ವೆ ಹಳಿ ತಡೆಗೋಡೆಯಿಂದ ಮಾನವ ಆನೆ ಸಂಘರ್ಷ ನಿಯಂತ್ರಣ" ಎಂಬ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಅದರಂತೆ, ಉಪಯೋಗಿತ ರೈಲ್ವೆ ಹಳಿಗಳನ್ನು ಉಪಯೋಗಿಸಿ 65.488 ಕಿ.ಮೀ. ಉದ್ದದ ಬ್ಯಾರಿಕೇಡ್ (ತಡೆಗೋಡೆ) ನಿರ್ಮಿಸಲಾಗಿದ್ದು, ಇದಕ್ಕಾಗಿ ರೂ.5000.00 ಲಕ್ಷಗಳು ವೆಚ್ಚವಾಗಿರುತ್ತದೆ. ಸದರಿ ವೆಚ್ಚವನ್ನು ರಾಜ್ಯ ಸರ್ಕಾರದ ರಾಜ್ಯ ವಲಯ ಯೋಜನೆ - **4406-Capital Outlay on Forestry & Wildlife-01-Forestry- 101-Forest Protection, Regeneration & Cultural Operation-0-01-Railway Barricade to Prevent Man-animal Conflict-132-Capital Expenses** ಇದರಡಿ ಭರಿಸಲಾಗಿದೆ. |
| ಇ) | ಅರಣ್ಯದಲ್ಲಿ ಕಳೆದ ವರ್ಷ ತಗುಲಿದ ಬೆಂಕಿ ಅನಾಹುತದಲ್ಲಿ ಮೃತಪಟ್ಟ ವನ್ಯ ಜೀವಿಗಳು ಯಾವುವು; (ಸಂಖ್ಯಾವಾರು ವಿವರ ಒದಗಿಸುವುದು) | ಕಳೆದ ವರ್ಷ ರಾಜ್ಯದ ರಕ್ಷಿತಾರಣ್ಯ ಪ್ರದೇಶಗಳಲ್ಲಿ ಉಂಟಾದ ಬೆಂಕಿ ಅನಾಹುತದಲ್ಲಿ ವನ್ಯಪ್ರಾಣಿಗಳು ಮೃತಪಟ್ಟಿರುವ ಬಗ್ಗೆ ವರದಿಯಾಗಿರುವುದಿಲ್ಲ. |
| ಈ) | ನಾಶಗೊಂಡ ಅರಣ್ಯ ಪುನರ್ ವೃದ್ಧಿ ಹಾಗೂ ವನ್ಯ ಜೀವಿಗಳಿಗೆ ಸುರಕ್ಷಿತ ಅರಣ್ಯ ಪರಿಸರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಅರಣ್ಯ ಪುನರ್ ವೃದ್ಧಿ ಹಾಗೂ ವನ್ಯಜೀವಿಗಳಿಗೆ ಸುರಕ್ಷಿತ ಅರಣ್ಯ ಪರಿಸರ ಒದಗಿಸಲು ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸುವುದು, ಮಣ್ಣು ಮತ್ತು ಸವಕಳಿ ಕಾಮಗಾರಿ ಕೈಗೊಳ್ಳುವುದು ಹಾಗೂ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳನ್ನು ನಿರ್ಮಿಸಿ, ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗಿದೆ. |

**ಸಂಖ್ಯೆ: ಅಪಜೀ 202 ಎಫ್‌ಡಬ್ಲ್ಯೂಎಲ್ 2020**

**(ಆನಂದ್ ಸಿಂಗ್)**
**ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು**